# ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ: ಕೇಂದ್ರ ಕಛೇರಿ: ಬೆಂಗಳೂರು

## ಪತ್ರಿಕಾ ಪ್ರಕಟಣೆ

ದಿನಾಂಕ 13.06.2017 ರಂದು ಪುತ್ತೂರು ವಿಭಾಗದ ಮಡಿಕೇರಿ ಘಟಕದ ವಾಹನ ಸಂಖ್ಯೆ ಕೆಎ09 ಎಫ್ 4768, ವಿರಾಜಪೇಟೆ – ಮೈಸೂರು ಮಾರ್ಗದಲ್ಲಿ ಕಾರ್ಯಾಚರಣೆಯಲ್ಲಿರುವಾಗ ಸುಮಾರು 15.57ರ ಸಮಯದಲ್ಲಿ ಹುಣಸೂರು ತಾಲ್ಲೋಕಿನ ಹಾಳಗೆರೆ ಗ್ರಾಮದ ಬಳಿ ನಿಗಮದ ವಾಹನದ ಮುಂದೆ ಹೋಗುತ್ತಿದ್ದ ಮೋಟಾರ್ ಬೈಕ್‌ನ್ನು ಓವರ್‌ಟೇಕ್ ಮಾಡಲು ರಸ್ತೆಯ ಬಲಭಾಗಕ್ಕೆ ಬಂದಾಗ ಎದುರುಗಡೆಯಿಂದ ಬರುತ್ತಿದ್ದ ದ್ವಿಚಕ್ರ ವಾಹನದ ನಡುವೆ ಮುಖಾ–ಮುಖಿ ಡಿಕ್ಕಿಯಾದ ಪರಿಣಾಮ ದ್ವಿಚಕ್ರ ಸವಾರ ಸ್ಥಳದಲ್ಲೇ ಮೃತಪಟ್ಟಿರುತ್ತಾರೆ ಹಾಗೂ ಹಿಂಬದಿ ಸವಾರನಿಗೆ ಗಂಭೀರವಾಗಿ ಗಾಯಗಳಾಗಿದ್ದು, ಗಾಯಾಳುವನ್ನು ಮೈಸೂರಿನ ಅರವಿಂದ ಆಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲಿಸಲಾಗಿದೆ.

ಮೈಸೂರು ಗ್ರಾಮಾಂತರ ವಿಭಾಗದ 1) ವಿಭಾಗೀಯ ನಿಯಂತ್ರಣಾಧಿಕಾರಿ 2) ವಿಭಾಗೀಯ ಸಂಚಾರ ಅಧಿಕಾರಿ 3) ವಿಭಾಗೀಯ ತಾಂತ್ರಿಕ ಶಿಲ್ಪಿ 4) ಉಪ ಮುಖ್ಯ ಭದ್ರತಾ ಮತ್ತು ಜಾಗೃತಾಧಿಕಾರಿ 5) ಘಟಕ ವ್ಯವಸ್ಥಾಪಕರು, ಹುಣಸೂರು ಘಟಕ ರವರು ಸಮಯ ಸುಮಾರು 18.30 ರಲ್ಲಿ ಅಪಘಾತ ಸ್ಥಳಕ್ಕೆ ಬೇಟಿ ನೀಡಿರುತ್ತಾರೆ.

ಮೃತರ ವಾರಸುದಾರರಿಗೆ ನಿಗಮದ ವತಿಯಿಂದ ಮಧ್ಯಂತರ ಪರಿಹಾರ ಮೊತ್ತವನ್ನು ವಿತರಿಸಲಾಗಿದೆ ಹಾಗೂ ಗಾಯಾಳುವನ್ನು ಮೈಸೂರಿನ ಅರವಿಂದ ಆಸ್ಪತ್ರೆಯಲ್ಲಿ ಚಿಕಿತ್ಸೆಗಾಗಿ ದಾಖಲಿಸಿದ್ದು, ನಿಗಮದ ಅಧಿಕಾರಿಗಳು ಈ ದಿನವೂ ಸಹ ಆಸ್ಪತ್ರೆಗೆ ಭೇಟಿ ನೀಡಿ ವೈದ್ಯಾಧಿಕಾರಿಗಳನ್ನು ಸಂಪರ್ಕಿಸಿ ಗಾಯಾಳುವಿಗೆ ಎಲ್ಲಾ ರೀತಿಯ ಚಿಕಿತ್ಸೆ ನೀಡುವ ಸಂಬಂಧ ವೈದ್ಯರೊಂದಿಗೆ ನಿರಂತರ ಸಂಪರ್ಕದಲ್ಲಿದ್ದು ಗಾಯಾಳುವಿನ ಆರೋಗ್ಯದ ಬಗ್ಗೆ ಕಾಳಜಿ ವಹಿಸಲಾಗುತ್ತಿದೆ. ಗಾಯಾಳುವಿನ ವೈದ್ಯಕೀಯ ವೆಚ್ಚವನ್ನು ನಿಗಮದ ವತಿಯಿಂದ ಭರಿಸಲಾಗುವುದು.

ಅತಿವೇಗ ಹಾಗೂ ಅಜಾಗರೂಕತೆಯಿಂದ ಚಾಲನೆ ಮಾಡಿದ ಕರ್ತವ್ಯ ನಿರತ ಚಾಲಕರಾದ ಶ್ರೀ. ಡಿ.ಪಿ.ಪುನೀತ್, ಚಾಲಕ–ಕಂ–ನಿರ್ವಾಹಕ, ಬಿ.ಸಂ 429 ರವರನ್ನು ಕರ್ತವ್ಯದಿಂದ ಅಮಾನತ್ತುಗೊಳಿಸಲಾಗಿದೆ.

ಸಹಿ/–

**ಮುಖ್ಯ ಸಂಚಾರ ವ್ಯವಸ್ಥಾಪಕರು (ವಾ)**